ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

16

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಸಭೆ - ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ  ದಿನಾಂಕ : DATE : 11-12-202

# ಅಧಿವೇಶನ: ಒಂದೂ ದಿನ ಕಲಾಪಕ್ಕೆ ಬಾರದ ಎಚ್‌ಡಿಕೆ!

ಕ.ಪ್ರ 11/12/20

## ಕಳೆದಬಾರಿಯೂ ಹಾಜರಾಗಿರಲಿಲ್ಲ ಮಾಜಿ ಸಿಎಂ



ಬೆಂಗಳೂರು : ಪ್ರತಿಪಕ್ಷ ಕಾಂಗ್ರೆಸ್ ನಡೆಯನ್ನು ಖಂಡಿಸಿ ರೈತರ ಕುರಿತ ಕಾಳಜಿಯನ್ನು ಟ್ವೀಟರ್‌ನಲ್ಲಿ ವ್ಯಕ್ತಪಡಿಸಿರುವ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಈ ಬಾರಿಯ ಚಳಿಗಾಲದ ವಿಧಾನಸಭೆಯ ಅಧಿವೇಶನಕ್ಕೆ ಸಂಪೂರ್ಣ ಗೈರುಹಾಜರಾಗಿದ್ದರು. ಕಳೆದ ಬಾರಿಯ ಅಧಿವೇಶನದಲ್ಲಿಯೂ ಕುಮಾರಸ್ವಾಮಿ ಹಾಜರಾಗಿರಲಿಲ್ಲ. ಕೊರೋನಾ ನೆಪ ಹೇಳಿ ಕೇವಲ ಒಂದು ದಿನ ಮಾತ್ರ ಹಾಜರಾಗಿದ್ದರು. ಆದರೆ, ಈ ಬಾರಿ ಕೇವಲ ನಾಲ್ಕು ದಿನಗಳ ಕಾಲ ನಡೆದರೂ ಒಮ್ಮೆಯೂ ಸದನದತ್ತ ಸುಳಿಯಲಿಲ್ಲ. ಇದು ಜೆಡಿಎಸ್ ಪಕ್ಷದಲ್ಲಿಯೂ ಅಸಮಾಧಾನಕ್ಕೆ ಕಾರಣವಾಗಿದೆ. ಸಮಾಜದ ಬಗ್ಗೆ, ರೈತರ ಬಗ್ಗೆ ಕಾಳಜಿ ವ್ಯಕ್ತಪಡಿಸಿ ಕೇವಲ ಟ್ವೀಟರ್‌ಗೆ ಮಾತ್ರ ಸಿಮೀತರಾಗಿದ್ದಾರೆ. ಅಧಿವೇಶನದ ವೇಳೆ ಸದನದಿಂದ ದೂರ ಉಳಿಯುತ್ತಾರೆ. ಪಕ್ಷದ ಸದಸ್ಯರು ಮಾತ್ರ ಭಾಗಿಯಾಗುತ್ತಾರೆ. ಕುಮಾರಸ್ವಾಮಿ ಸದನದಿಂದ ದೂರ ಉಳಿಯುತ್ತಿರುವುದರ ಕಾರಣ ಮಾತ್ರ ನಿಗೂಢವಾಗಿದೆ. ಕೆಲವೊಮ್ಮೆ ಆಗಮಿಸುವ ಕುಮಾರಸ್ವಾಮಿ, ಅಧಿವೇಶನದ ಚರ್ಚೆಯಲ್ಲಿ ಭಾಗಿಯಾಗುವುದಿಲ್ಲ. ಇದು ಪಕ್ಷದ ಸದಸ್ಯರಿಗೆ ಆತ್ಮವಿಶ್ವಾಸ ಕುಂದಿಸುವಂತೆ ಮಾಡುತ್ತದೆ. ಅಧಿವೇಶನಕ್ಕೂ ಮುನ್ನ ಪ್ರತಿಬಾರಿ ಪಕ್ಷದ ಶಾಸಕಾಂಗ ಸಭೆಯನ್ನು ಕರೆಯಲಾಗುತ್ತದೆ. ಆದರೆ, ಈ ಬಾರಿ ಸದನದಲ್ಲಿ ಯಾವ ವಿಷಯದ ಬಗ್ಗೆ ಚರ್ಚೆ ನಡೆಸಬೇಕು ಎಂಬುದರ ಬಗ್ಗೆ ತೀರ್ಮಾನಿಸಲೂ ಶಾಸಕಾಂಗ ಸಭೆ ಕರೆದಿಲ್ಲ. ಈ ಬಗ್ಗೆ ಪಕ್ಷದ ಹಲವು ಶಾಸಕರು ಬೇಸರ ವ್ಯಕ್ತಪಡಿಸಿದ್ದಾರೆ.